ಶ್ರೀ

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ - ಆದೇಶ.

ಓದಲಾಗಿದೆ:-
1. ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಖ್ಯೆ: ಲೋಕ್/ಐಎನ್‌ವಿ(ಜಿ)/ಜಿ-04/ಸಿಆರ್-04/2025 ಕೊಪ್ಪಳ, ದಿನಾಂಕ: 30.08.2025.
2. ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ರಾಯಚೂರು ಇವರ ಪತ್ರದ ಸಂಖ್ಯೆ: ಲೋಕ್/ಎಸ್‌ಪಿ/ಆರ್ ಸಿಆರ್/ಪ್ರಾ.ತ.ವ/2025/365, ದಿನಾಂಕ: 11.08.2025.
3. ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಕೊಪ್ಪಳ ಇವರ ಕೊಪ್ಪಳ ಲೋಕಾಯುಕ್ತ ಪೊಲೀಸ್ ಠಾಣೆ ಮೊ.ಸಂ.04/2025 ಕಲಂ.13(1)(b) ಸಹಿತ 13(2) ಲಂಚ ಪ್ರತಿಬಂಧಕ ಕಾಯ್ದೆ-1988 (ತಿದ್ದುಪಡಿ ಕಾಯ್ದೆ-2018) ರಡಿಯಲ್ಲಿನ ಪ್ರಾಥಮಿಕ ತನಿಖಾ ವರದಿ ಸಂಖ್ಯೆ: ಲೋಕ್/ಪಿಐ-4/ಕೊಪ್ಪಳ/ಮೊ.ಸಂ.04-2025/570, ದಿನಾಂಕ: 04.08.2025.
4. ಸುತ್ತೋಲೆ ಸಂಖ್ಯೆ:ಸಿಆಸುಇ 40 ಸೇಇವಿ 2014, ದಿನಾಂಕ:20.10.2014.

**********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ದಿನಾಂಕ: 30.08.2025ರ ಪತ್ರದಲ್ಲಿ, ಆರೋಪಿತರಾದ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರು ತಮ್ಮ ಎಲ್ಲಾ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುತ್ತಾರೆ ಎಂಬ ನಂಬಲಾರ್ಹ ಮಾಹಿತಿಯ ಆಧಾರದ ಮೇರೆಗೆ ಆರೋಪಿತರು ಅವರ ಅಸಮತೋಲನ ಆಸ್ತಿಗಳ ಮೌಲ್ಯ ರೂ.1,20,21,275/-ರೂ.ಗಳಷ್ಟು ಆಗುತ್ತಿದ್ದು, ಅಸಮತೋಲನ ಆಸ್ತಿಗಳ ಪ್ರಮಾಣ ಶೇ.89.13ರಷ್ಟು ಇರುವುದಾಗಿ ಕಂಡುಬಂದಿರುವುದರಿಂದ ಇವರ ವಿರುದ್ಧ ಕೊಪ್ಪಳ ಲೋಕಾಯುಕ್ತ ಪೊಲೀಸ್ ಠಾಣೆಯ ಮೊ.ಸಂ.04/2025 ಕಲಂ 13(1)(ಬಿ) ಸಹಿತ 13(2) ಪಿ.ಸಿ.ಕಾಯ್ದೆ 1988 (ತಿದ್ದುಪಡಿ ಕಾಯ್ದೆ 2018)ರ ರೀತ್ಯಾ ದಿನಾಂಕ:22.07.2025ರಂದು ಪ್ರಕರಣವನ್ನು ದಾಖಲಿಸಿಕೊಳ್ಳಲಾಯಿತು. ಪ್ರಕರಣವನ್ನು ದಾಖಲಿಸಿದ ನಂತರ ಶೋಧನಾ ವಾರೆಂಟ್‌ಗಳನ್ನು ಪಡೆದುಕೊಂಡು, ಆರೋಪಿತರ ವಾಸದ ಮನೆಗಳು, ಕರ್ತವ್ಯ ನಿರ್ವಹಿಸುತ್ತಿರುವ ಕಚೇರಿ ಮತ್ತು ಇತರೆ ಸ್ಥಳ ಹಾಗೂ ದಾಖಲಾತಿಗಳನ್ನು ಪರಿಶೀಲನೆ ಮಾಡಿ ಪಂಚಸಾಕ್ಷಿಗಳ ಸಮಕ್ಷಮ ಶೋಧಿಸಲಾಯಿತು. ಪ್ರಸ್ತುತ ಪ್ರಕರಣವು ತನಿಖಾ ಹಂತದಲ್ಲಿರುತ್ತದೆ ಹಾಗೂ ತನಿಖಾಧಿಕಾರಿಗಳು ಇಲ್ಲಿಯವರೆಗೂ ನಡೆಸಿದ ಶೋಧನೆ/ತನಿಖೆಯಿಂದ ಆರೋಪಿತರ ಅಕ್ರಮ ಆಸ್ತಿ ಸಂಪಾದನೆಯು ಶೇ.204.41%ರಷ್ಟು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ ಎಂದು ಪ್ರಾಥಮಿಕ ತನಿಖಾ ವರದಿಯಲ್ಲಿ ಉಲ್ಲೇಖಿಸಿರುತ್ತಾರೆ.

--2

ತನಿಖಾಧಿಕಾರಿಗಳಾದ ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ ಪೊಲೀಸ್ ಠಾಣೆ, ಕೊಪ್ಪಳ ಇವರ ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ದಿನಾಂಕ:04.08.2025ರ ಪತ್ರದಲ್ಲಿನ ಕೋರಿಕೆಯಂತೆ ಆರೋಪಿತರಾದ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರ ವಿರುದ್ಧ ಸೂಕ್ತ ಶಿಸ್ತಿನ ಕ್ರಮ ಜರುಗಿಸುವಂತೆ ಆರಕ್ಷಕ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ರಾಯಚೂರು ಇವರ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ದಿನಾಂಕ:11.08.2025ರ ಪತ್ರದಲ್ಲಿ ಕೋರಿರುತ್ತಾರೆ. ಮುಂದುವರೆದು, ಆಪಾದಿತರು ಈಗ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿಯೇ ಮುಂದುವರೆಸಿದಲ್ಲಿ ಅವರು ಪ್ರಕರಣದ ತನಿಖೆಗೆ ಅಡ್ಡಿ ಉಂಟುಮಾಡುವ ಅಥವಾ ತನಿಖೆಯಲ್ಲಿ ಹಸ್ತಕ್ಷೇಪ ಮಾಡಿ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಾಕ್ಷ್ಯಧಾರಗಳನ್ನು ನಾಶಗೊಳಿಸುವ ಸಾಧ್ಯತೆಗಳಿರುವುದರಿಂದ ಪ್ರಕರಣದ ನಿಷ್ಪಕ್ಷಪಾತವಾದ ತನಿಖೆಗೆ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸದರಿಯವರ ಸ್ಥಳ (ಲೀನ್) ವರ್ಗಾವಣೆ ಮಾಡಲು ಕೋರಿರುತ್ತಾರೆ. ಮುಂದುವರೆದು, ತನಿಖಾಧಿಕಾರಿಗಳ ಮಧ್ಯಂತರ ತನಿಖಾ ವರದಿ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಸುತ್ತೋಲೆ ಸಂಖ್ಯೆ:ಸಿಆಸುಇ 40 ಸೇಇವಿ 2014, ದಿ:20.10.2014 ಗಳನ್ನು ಪರಿಶೀಲಿಸಿ ನಿಯಮಾನುಸಾರ ಸೂಕ್ತವೆಂದು ಪರಿಗಣಿಸಲಾದ ಕ್ರಮ ಕೈಗೊಳ್ಳಲು (action as deemed fit) ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿನ ಸುತ್ತೋಲೆಯಲ್ಲಿ ಲೋಕಾಯುಕ್ತ ಸಂಸ್ಥೆಯಿಂದ ದಾಳಿಗೆ ಒಳಗಾಗಿರುವ ಸರ್ಕಾರಿ ನೌಕರರನ್ನು ಲೋಕಾಯುಕ್ತರು ಮಾಡುವ ಶಿಫಾರಸ್ಸಿನ ಮೇರೆಗೆ ಸೇವೆಯಿಂದ ಅಮಾನತ್ತುಗೊಳಿಸುವ ಕುರಿತು ಈ ಕೆಳಕಂಡಂತೆ ಸೂಚನೆಗಳನ್ನು ನೀಡಲಾಗಿದೆ.

> "ಭ್ರಷ್ಟಾಚಾರ ತಡೆ ಅಧಿನಿಯಮ 1988ರಡಿ ಕರ್ನಾಟಕ ಲೋಕಾಯುಕ್ತದ ಪೊಲೀಸ್ ವಿಭಾಗವು ಘೋಷಿತ ಆಸ್ತಿಗಿಂತ ಹೆಚ್ಚಿನ ಆಸ್ತಿಯನ್ನು ಹೊಂದಿರುವ ಸರ್ಕಾರಿ ಅಧಿಕಾರಿ/ನೌಕರರ ಮೇಲೆ ದಾಳಿ ಮಾಡಿರುವ ಪ್ರಕರಣಗಳಲ್ಲಿ ಮೇಲ್ನೋಟಕ್ಕೆ ಸರ್ಕಾರಿ ಅಧಿಕಾರಿ/ನೌಕರರು ತಪ್ಪಿತಸ್ಥರೆಂದು ಕಂಡು ಬಂದಾಗ ತನಿಖೆಯು ಸುಸೂತ್ರವಾಗಿ ನಡೆಯ ಬೇಕೆಂಬ ಉದ್ದೇಶದಿಂದ ಸಂಬಂಧಿತ ಸರ್ಕಾರಿ ನೌಕರರನ್ನು ಅಮಾನತ್ತಿನಲ್ಲಿರಿಸಲು ಲೋಕಾಯುಕ್ತ ಸಂಸ್ಥೆಯ ಪೊಲೀಸ್ ವಿಭಾಗವು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದಾಗ ದಾಳಿಗೊಳಗಾದ ಸರ್ಕಾರಿ ನೌಕರರನ್ನು ಅಮಾನತ್ತುಗೊಳಿಸಲು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ನಿಯಮ 10(1)(ಎಎ)ರನ್ವಯ ಆಸ್ಪದವಿದ್ದು, ಸರ್ಕಾರಿ ನೌಕರರನ್ನು ಅಮಾನತ್ತಿನಲ್ಲಿಡಲು ಅಧಿಕಾರ ಹೊಂದಿರುವ ಸಕ್ಷಮ ಪ್ರಾಧಿಕಾರಿಗಳು ಲೋಕಾಯುಕ್ತ ದಾಳಿ ಪ್ರಕರಣ ತಮ್ಮ ಗಮನಕ್ಕೆ ಬಂದ ಕೂಡಲೇ ಕರ್ನಾಟಕ ಲೋಕಾಯುಕ್ತದಲ್ಲಿನ ಸಂಬಂಧಪಟ್ಟ ಅಧಿಕಾರಿಗಳಿಂದ ದಾಳಿಯ ವಿವರಗಳನ್ನು ತಕ್ಷಣವೇ ಪಡೆದು ಮೇಲ್ಕಂಡ ನಿಯಮಗಳ ನಿಯಮ 10(1)(ಎಎ) ಮತ್ತು ನಿಯಮ 10(3)ರನ್ವಯ ಪರಿಶೀಲಿಸಿ ಮೇಲ್ನೋಟದ ಸಾಕ್ಷ್ಯವಿರುವುದು ಸಕ್ಷಮ ಪ್ರಾಧಿಕಾರಿಗೆ ಖಚಿತವಾದಲ್ಲಿ ತಪ್ಪದೇ ಕಟ್ಟುನಿಟ್ಟಾಗಿ ಅಂತಹ ಸರ್ಕಾರಿ ನೌಕರರನ್ನು ಅಮಾನತ್ತಿನಲ್ಲಿಡಲು ಕ್ರಮ ಜರುಗಿಸುವಂತೆ ಸೂಚಿಸಲಾಗಿದೆ."

ಶ್ರೀ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರು ಸರ್ಕಾರಕ್ಕೆ ಸಲ್ಲಿಸಿರುವ 2024-25ನೇ ಸಾಲಿನ ಆಸ್ತಿ ಮತ್ತು ದಾಯಿತ್ವ ತಃಖ್ತೆಯನ್ನು ಪರಿಶೀಲಿಸಲಾಗಿ, ಸ್ಥಿರಾಸ್ತಿಗಳಲ್ಲಿ ಬಿಜಾಪುರ ದಲ್ಲಿ ರೂ.10.00 ಲಕ್ಷ ಮೌಲ್ಯದ ಪಿತ್ರಾರ್ಜಿತ ಮನೆ ಹಾಗೂ ಧಾರವಾಡದಲ್ಲಿ ಅಧಿಕಾರಿಯವರ ಹೆಸರಿನಲ್ಲಿ ರೂ.25.00 ಲಕ್ಷ ಮೌಲ್ಯದ ಮನೆಯನ್ನು ಘೋಷಿಸಿಕೊಂಡಿರುತ್ತಾರೆ. ಚರಾಸ್ತಿಗಳಲ್ಲಿ ತಾಯಿಯವರ 200 ಗ್ರಾಂ ಬಂಗಾರ, ಹೆಂಡತಿಯವರ 420 ಗ್ರಾಂ ಬಂಗಾರ, 1500 ಗ್ರಾಂ ಬೆಳ್ಳಿ, 1 ಮೋಟಾರ್ ಸೈಕಲ್ ಮತ್ತು ರೂ.6,52,595/-ಗಳ ನಗದನ್ನು ಘೋಷಿಸಿಕೊಂಡಿರುತ್ತಾರೆ. ಉಳಿದಂತೆ, ಲೋಕಾಯುಕ್ತ

ವರದಿಯಲ್ಲಿನ ಇತರೆ ಸ್ಥಿರಾಸ್ತಿಗಳನ್ನು ಘೋಷಿಸಿಕೊಂಡಿರುವುದಿಲ್ಲ. ಇದರಿಂದಾಗಿ ಸದರಿಯವರು ಅವರ ಬಲ್ಲ ಆದಾಯ ಮೂಲಗಳಿಗಿಂತ ಹೆಚ್ಚಿನ ಆರ್ಥಿಕ ಸಂಪನ್ಮೂಲಗಳನ್ನು ಅಥವಾ ಆಸ್ತಿಯನ್ನು ಹೊಂದಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ, ಶ್ರೀ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರು ತಮ್ಮ ಗೊತ್ತಾದ ಆದಾಯಕ್ಕಿಂತ ಹೆಚ್ಚಿನ ಅಕ್ರಮ ಆಸ್ತಿಗಳನ್ನು ಹೊಂದಿರುವುದು ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಒದಗಿಸಿರುವ ದಾಖಲಾತಿಗಳಿಂದ ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡು ಬಂದಿರುವುದರಿಂದ ಆರೋಪಿತರು ಪ್ರಕರಣದ ಸುಗಮ ತನಿಖೆಗೆ ಅಡ್ಡಿಪಡಿಸುವ ಅಥವಾ ತನಿಖೆಯಲ್ಲಿ ಹಸ್ತಕ್ಷೇಪ ಮಾಡುವ ಹಾಗೂ ಸಾಕ್ಷಿಪುರಾವೆಗಳನ್ನು ನಾಶಪಡಿಸುವ ಸಾಧ್ಯತೆಗಳು ಇರುವುದರಿಂದ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸಿನಂತೆ ಹಾಗೂ ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ನೀಡಿರುವ ಸೂಚನೆಗಳನ್ವಯ, ಶ್ರೀ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 10(1)(ಎಎ) ರನ್ವಯ ಸೇವೆಯಿಂದ ಅಮಾನತ್ತುಗೊಳಿಸಲು ಹಾಗೂ ಸದರಿಯವರ ಲೀನ್ ಬದಲಾಯಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ವಾಕೈ 205 ಕೈಸೇವಿ 2025, ಬೆಂಗಳೂರು,</u>**
**<u>ದಿನಾಂಕ: 22.09.2025.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರು ತಮ್ಮ ಗೊತ್ತಾದ ಆದಾಯಕ್ಕಿಂತ ಹೆಚ್ಚಿನ ಆಸ್ತಿಯನ್ನು ಹೊಂದಿರುವುದು ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿಯಿಂದ ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡುಬಂದಿರುವುದರಿಂದ ಶ್ರೀ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ ಇವರ ಲೀನ್ ಅನ್ನು ಜಿಲ್ಲಾ ಪಂಚಾಯತ್ ಕೈಗಾರಿಕಾ ವಿಭಾಗ, ಬಳ್ಳಾರಿ ಇಲ್ಲಿ ಖಾಲಿ ಇರುವ ಉಪ ನಿರ್ದೇಶಕರು (ಗ್ರಾಕೈ) ಹುದ್ದೆಗೆ ಎದುರಾಗಿ ತೋರಿಸಿ, ಇವರನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 10(1)(ಎಎ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತಿನಲ್ಲಿಡಲಾಗಿದೆ.

ಶ್ರೀ ಶೇಖು ತಂದೆ ಮಾಧು ಚವ್ಹಾಣ, ಉಪ ನಿರ್ದೇಶಕರು ಇವರು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 98 ರಂತೆ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ ಹಾಗೂ ಅಮಾನತ್ತಿನ ಅವಧಿಯಲ್ಲಿ ಇವರು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆಯದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
22/9/2025
(ಎಸ್. ಅರುಣ್)
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ
(ಸೇವೆಗಳು ಮತ್ತು ಸಮನ್ವಯ)

**<u>ಇವರಿಗೆ:-</u>**

1. ಮಹಾಲೇಖಪಾಲರು (ಎ &ಇ), ಕರ್ನಾಟಕ, ಬೆಂಗಳೂರು.
2. ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

--4

3. ಜಿಲ್ಲಾಧಿಕಾರಿಗಳು, ಕೊಪ್ಪಳ / ಬಳ್ಳಾರಿ ಜಿಲ್ಲೆ.
4. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಪ್ಪಳ / ಬಳ್ಳಾರಿ ಜಿಲ್ಲೆ.
5. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಅಪರ ನಿರ್ದೇಶಕರು (ಆಡಳಿತ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ರಾಯಚೂರು.
8. ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ ಪೊಲೀಸ್ ಠಾಣೆ, ಕೊಪ್ಪಳ – 583231.
9. ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ / ಬಳ್ಳಾರಿ.
10. ಶ್ರೀ ಎಸ್.ಎಂ.ಚವ್ಹಾಣ್, ಉಪ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ. (RPAD / Speed Post ಮುಖಾಂತರ)
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:-</u>

1. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಅಧಿಕೃತ
ಅಂತರ್ಜಾಲತಾಣ www.industry.karnataka.gov.in ವೀಕ್ಷಿಸಿ